# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1531 (1755)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಬಿ.ಎಂ.ಫಾರೂಖ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ವಿಷಯ : ಮಂಗಳೂರಿನಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಅವಶ್ಯಕತೆ ಬಗ್ಗೆ

(ಅ) ಮಂಗಳೂರು ತಾಲ್ಲೂಕಿನಲ್ಲಿ ಹೆಚ್ಚಿನ ಕೈಗಾರಿಕೆ ಪ್ರತಿಷ್ಠಿತ ಉದ್ಯಮಗಳು ಅಸ್ತಿತ್ವದಲ್ಲಿದ್ದು, ದಿನೇ ದಿನೇ ಜನಸಂಖ್ಯೆಯು ಹೆಚ್ಚುತ್ತಿರುವುದಲ್ಲದೆ ಬಡ ಕಾರ್ಮಿಕರಿಗೆ, ಬಡವರಿಗೆ ಹಾಗೂ ಕೂಲಿ ಕಾರ್ಮಿಕರಿಗೆ ಸೂಕ್ತ ಚಿಕಿತ್ಸೆ ಒದಗಿಸಲು ಯಾವುದೇ ಉತ್ತಮ ಸರ್ಕಾರಿ ಆಸ್ಪತ್ರೆಗಳಿಲ್ಲದೆ, ರೋಗಿಗಳು ವೈದ್ಯಕೀಯ ಸೌಲಭ್ಯಗಳಿಂದ ವಂಚಿತರಾಗಿದ್ದು, ಸುಮಾರು 7-8 ಮೆಡಿಕಲ್ ಕಾಲೇಜುಗಳು ಸಿರಿವಂತರಿಗೆ ಮಾತ್ರವೇ ಉಪಯೋಗವಾಗುತ್ತಿವೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಮಂಗಳೂರು ತಾಲ್ಲೂಕಿನ ಸಾಮಾನ್ಯ ಜನತೆಯ ಆರೋಗ್ಯ ಕಲ್ಯಾಣಕ್ಕಾಗಿ ಕೇಂದ್ರ ಸರ್ಕಾರದ ನೆರವಿನಿಂದ ಒಂದು ಉತ್ತಮ ಸಾರ್ವಜನಿಕ ಆಸ್ಪತ್ರೆ ಒಳಗೊಂಡಂತೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ತೆರೆಯಲು ಸರ್ಕಾರ ಮುಂದಾಗುವುದೇ? (ಸಂಪೂರ್ಣ ಮಾಹಿತಿ ನೀಡುವುದು)